# ಪ್ರವಾದಿ ಹಬೂಕ್ಕೂಕನ ಗ್ರಂಥ

## ಮುನ್ನುಡಿ

ಕ್ರಿ.ಪೂ. ಏಳನೇ ಶತಮಾನ. ಬಾಬಿಲೋನಿನವರು ಯೆಹೂದ್ಯರನ್ನು ಆಳುತ್ತಿದ್ದ ಕಾಲ. ಆಗ ತಮ್ಮ ಆಳ್ವಿಕೆಗೆ ಒಳಪಟ್ಟವರನ್ನು ಕ್ರೂರವಾಗಿ ಹಿಂಸಿಸುವುದು ಸರ್ವೇಸಾಮಾನ್ಯವಾಗಿತ್ತು. ಎಂದೇ ಯೆಹೂದ್ಯರು ಬಾಬಿಲೋನಿನವರ ದಬ್ಬಾಳಿಕೆಗೆ ಹೊರತಾಗಲಿಲ್ಲ. ಆಗ ಪ್ರವಾದಿಯಾಗಿದ್ದ ಹಬಕ್ಕೂಕನು ತನ್ನ ಜನರ ಪರಿಸ್ಥಿತಿಯನ್ನು ಕಂಡು ಮನಮರುಗಿ ದೇವರಲ್ಲಿ ಮೊರೆಯಿಡುತ್ತಾನೆ: "ದುಷ್ಟನು ಶಿಷ್ಟನಾದವನನ್ನು ಕಬಳಿಸುತ್ತಿರುವುದನ್ನು ನೋಡಿ ಸುಮ್ಮನಿರುವೆ, ಏಕೆ?" (1.13) ಎಂದು ಕೇಳುತ್ತಾನೆ. ಅದಕ್ಕೆ ದೇವರು: "ನಿಯಮಿತ ಕಾಲದಲ್ಲಿ ನ್ಯಾಯನಿರ್ಣಯವಾಗುವುದು. ಸಜ್ಜನನು ಶ್ರದ್ಧೆಯಿಂದ ಜೀವಿಸುವನು" ಎಂದು ಉತ್ತರಿಸುತ್ತಾರೆ.

ಮೇಲ್ಕಂಡ ವಿಷಯಗಳನ್ನೊಳಗೊಂಡ ಈ ಗ್ರಂಥದಲ್ಲಿ ದುರುಳರಿಗೆ ಬರಲಿರುವ ದಂಡನೆಯನ್ನು ಕುರಿತು ಪ್ರವಾದಿ ಪ್ರಸ್ತಾಪಿಸುತ್ತಾನೆ. ಕೊನೆಯದಾಗಿ ದೇವರ ಮಹಿಮೆಯನ್ನೂ ಅವರಲ್ಲಿ ತನಗಿದ್ದ ಭಕ್ತಿ ವಿಶ್ವಾಸವನ್ನೂ ವರ್ಣಿಸುತ್ತಾ ಒಂದು ಗೀತೆಯನ್ನು ರಚಿಸುತ್ತಾನೆ.

## ಪರಿವಿಡಿ


| | | | | |
|---|---|---|---|---|
| ಹಬಕ್ಕೂಕನ ಮೊರೆ – ದೇವರ ಸದುತ್ತರ | – | 1.1 | – | 2.4 |
| ದುರುಳರಿಗೆ ಬರಲಿರುವ ದಂಡನೆ | – | 2.5 | – | 2.20 |
| ಹಬಕ್ಕೂಕನ ಪ್ರಾರ್ಥನೆ | – | 3.1 | – | 3.19 |


1 ಪ್ರವಾದಿ ಹಬಕ್ಕೂಕನಿಗೆ ಪ್ರಕಟಿಸಲಾದ ದೈವೋಕ್ತಿ:

ಪ್ರವಾದಿಯ ಕೋರಿಕೆ

2 ನಾನೆಷ್ಟು ಕಾಲ ಸರ್ವೇಶ್ವರಾ, ಮೊರೆ ಇಡುತ್ತಿರಬೇಕು ನಿನಗೆ? ನೀನೆಷ್ಟು ಕಾಲ ಸುಮ್ಮನಿರುವೆ
ಕಿವಿಗೊಡದೆ ನನಗೆ? ಹಿಂಸೆಯಾಗುತ್ತಿದೆಯೆಂದು ನಾ ಕೂಗಿದೆ; ಆದರೂ ನೀ ಸುಮ್ಮನಿರುವೆ, ರಕ್ಷಣೆ ನೀಡದೆ.
3ಕೇಡನ್ನು ನಾ ನೋಡುವಂತೆ ಮಾಡಿದೆಯೇಕೆ? ಕಷ್ಟವನ್ನು ನಾ ಕಾಣುವಂತೆ ಮಾಡಿದೆಯೇಕೆ?
ಹಿಂಸೆಬಾಧೆಗಳು ಇವೆ ನನ್ನ ಕಣ್ಣ ಮುಂದೆ. ಇಗೋ, ಜಗಳ ನಡೆಯುತಿದೆ, ವ್ಯಾಜ್ಯವೇಳುತಿದೆ. 4ಜಡವಾಗಿ
ಹೋಗಿದೆ ಧರ್ಮಶಾಸ್ತ್ರ; ಸ್ತಬ್ಧವಾಗಿದೆ ನ್ಯಾಯ ನೀತಿಯ ಚಕ್ರ. ಸಜ್ಜನರಿಗಿಂತ ದುರ್ಜನರ ಕೈ ಮೇಲಾಗಿದೆ;
ಎಂದೇ ನ್ಯಾಯ ನೀತಿ ತಲೆ ಕೆಳಗಾಗಿದೆ.

### ದೇವರ ಉತ್ತರ

5 ಈಗ ಸರ್ವೇಶ್ವರ ತಮ್ಮ ಜನರಿಗೆ ಇಂತೆಂದರು: "ಜನಾಂಗಗಳ ಮಧ್ಯೆ ನಡೆಯುವುದನ್ನು
ನೋಡಿರಿ. ನೋಡಿದರೆ ಬೆಕ್ಕಸಬೆರಗಾಗುವಿರಿ. ನಿಮ್ಮ ಕಾಲದಲ್ಲೇ ನಾನೊಂದು ಕಾರ್ಯವನ್ನು ಮಾಡುವೆನು.
ಅದನ್ನು ಕುರಿತು ನೀವು ಕಿವಿಯಾರೆ ಕೇಳಿದರೂ ನೀವು ನಂಬುವುದಿಲ್ಲ. 6ಇಗೋ, ಬಾಬಿಲೋನಿನವರನ್ನು
ಹುರಿದುಂಬಿಸಲಿದ್ದೇನೆ. ಅವರು ಭಯೋತ್ಪಾದಕರು ಹಾಗೂ ಉಗ್ರಗಾಮಿಗಳು. ಅವರು ಜಗದ ಉದ್ದಗಲಕ್ಕೂ
ಹರಡಿ, ತಮ್ಮದಲ್ಲದ ನಾಡುಗಳನ್ನು ಆಕ್ರಮಿಸಿಕೊಳ್ಳಲು ಸಂಚರಿಸುವರು. 7ಅವರು ಕ್ರೂರಿಗಳು, ಭಯಂಕರರು.

ತಮ್ಮದೇ ಆದ ನ್ಯಾಯನೀತಿಯನ್ನು ರೂಪಿಸಿಕೊಳ್ಳುವಂಥವರು; ತಮ್ಮನ್ನು ತಾವೇ ಗೌರವಿಸಿಕೊಳ್ಳುವ ಅಹಂಭಾವಿಗಳು.

8 "ಅವರ ಕುದುರೆಗಳು ಚಿರತೆಗಳಿಗಿಂತ ಬಿರುಸು; ಹಸಿದ ತೋಳಗಳಿಗಿಂತ ಚುರುಕು. ಅವರ ರಾಹುತರು ರಭಸದಿಂದ ಹಾರಿಬರುವರು. ಬೇಟೆಯನ್ನು ಕಬಳಿಸಲು ಕಾತರದಿಂದ ಹಾರುವ ರಣಹದ್ದಿನಂತೆ ದೂರದಿಂದ ಧಾವಿಸಿ ಬರುವರು. 9ಹಿಂಸೆ ಬಾಧೆಯನ್ನು ಗುರಿಯಾಗಿ ಇಟ್ಟುಕೊಂಡೇ ಮುನ್ನುಗ್ಗಿ ಬರುವರು. ಮರಳಿನ ಕಣಗಳಂತೆ ಲೆಕ್ಕವಿಲ್ಲದಷ್ಟು ಜನರನ್ನು ಸೆರೆ ಹಿಡಿಯುವರು.

10 "ಅವರು ಅರಸರನ್ನು ಅಪಹಾಸ್ಯಮಾಡುವರು; ಅಧಿಪತಿಗಳನ್ನು ಪರಿಹಾಸ್ಯಕ್ಕೆ ಗುರಿಮಾಡುವರು. ಕೋಟೆಗಳನ್ನು ಧೂಳೀಪಟ ಮಾಡುವರು. ಮಣ್ಣುಗುಡ್ಡೆ ಹಾಕಿ ಆಕ್ರಮಿಸಿಕೊಳ್ಳುವರು. 11ಬಿರುಗಾಳಿಯಂತೆ ಬಂದು ಮಾಯವಾಗುವವರು ಅವರು; ಸ್ವಂತ ಶಕ್ತಿಯೇ ದೈವ ಎಂದೆಣಿಸುವಂಥ ಅಪರಾಧಿಗಳು."

## ಪ್ರವಾದಿಯ ಮತ್ತೊಂದು ಮೊರೆ

12 ಸರ್ವೇಶ್ವರಾ, ನನ್ನ ದೇವರೇ, ಪರಮ ಪಾವನ ಸ್ವಾಮಿಯೇ, ಅನಾದಿಯಿಂದ ಇರುವಂಥವರು ನೀವು. ನಾವು ಖಂಡಿತ ಸಾಯುವುದಿಲ್ಲ. ನಮ್ಮನ್ನು ದಂಡಿಸುವಂತೆ ಆ ಬಾಬಿಲೋನಿನವರನ್ನು ನೇಮಿಸಿದವರು ನೀವು; ಅವರನ್ನು ಪ್ರಬಲಗೊಳಿಸಿದವರು ನೀವು. ನಮಗೆ ಪೊರೆಬಂಡೆ ನೀವೇ. 13ಕೇಡನ್ನು ನೋಡಲಾರದಷ್ಟು ನಿಷ್ಕಳಂಕ ನಿಮ್ಮ ಕಣ್ಣು. ಕೆಡುಕನ್ನು ಸಹಿಸಲಾಗದಷ್ಟು ಪವಿತ್ರರು ನೀವು. ಇಂತಿರಲು ಕೆಡುಕನ್ನು ನೋಡಿ ಕೊಂಡಿರುವಿರೇಕೆ? ದುಷ್ಟನು ಶಿಷ್ಟನಾದವನನ್ನು ಕಬಳಿಸುತ್ತಿರುವುದನ್ನು ನೋಡಿ ಸುಮ್ಮನಿರುವಿರೇಕೆ?

14 ಮನುಜರನ್ನು ಕಡಲ ಮೀನುಗಳಿಗೆ ಸಮನಾಗಿಸಿರುವಿರಿ, ಏಕೆ? ನಾಯಕನಿಲ್ಲದ ಕ್ರಿಮಿಕೀಟಗಳ ಗತಿಗೆ ಇಳಿಸಿರುವಿರಿ, ಏಕೆ? 15ಈ ಕಾರಣ ಆ ಬಾಬಿಲೋನಿಯರು ಮಾನವರನ್ನು ಗಾಳದಿಂದ ಸೆಳೆದುಕೊಳ್ಳುತ್ತಾರೆ; ಬಲೆಯಿಂದ ಬಾಚಿಕೊಳ್ಳುತ್ತಾರೆ; ತಮ್ಮ ಜಾಲದಲ್ಲಿ ರಾಶಿ ಹಾಕಿಕೊಳ್ಳುತ್ತಾರೆ; ಹಿರಿಹಿರಿ ಹಿಗ್ಗುತ್ತಾರೆ. 16ತಮ್ಮ ಬಲೆಗೆ ಬಲಿಕೊಡುತ್ತಾರೆ; ಧೂಪ ಹಾಕುತ್ತಾರೆ. ಅವುಗಳ ಮೂಲಕವೇ ಅವರ ಜೀವನ ಗಟ್ಟಿ; ಅವರ ಭೋಜನ ಪುಷ್ಟಿ.

17 ಹೀಗೆ ಅವರು ನಿರಂತರವಾಗಿ ತಮ್ಮ ಬಲೆಯಿಂದ ಭಾಗ್ಯವನ್ನು ಪಡೆದುಕೊಳ್ಳುತ್ತಿರಬೇಕೋ? ದಯದಾಕ್ಷಿಣ್ಯವಿಲ್ಲದೆ ರಾಷ್ಟ್ರಗಳನ್ನು ನಾಶ ಮಾಡುತ್ತಿರಬೇಕೋ?

## ದೇವರ ಪ್ರತ್ಯುತ್ತರ

**2** "ನಾನು ಕಾವಲುಗಾರನಾಗಿ ನಿಲ್ಲುವೆನು. ಕಾವಲುಗೋಪುರವನ್ನೇ ಹತ್ತಿ ನಿಂತುಕೊಳ್ಳುವೆನು. ಸರ್ವೇಶ್ವರ ನನಗೆ ಏನು ಹೇಳುವರೋ, ಯಾವ ಉತ್ತರ ಕೊಡುವರೋ, ಎಂದು ಎದುರುನೋಡುವೆನು."

2 ಆಗ ಸರ್ವೇಶ್ವರ ನನಗೆ ಕೊಟ್ಟ ಉತ್ತರ ಇದು: "ನೀನು ಕಂಡ ದರ್ಶನವನ್ನು ಬರೆ. ಓದುವವನು ಶೀಘ್ರವಾಗಿ ಓದುವಂತೆ ಹಲಗೆಗಳ ಮೇಲೆ ಅದನ್ನು ಕೆತ್ತು. 3ನಿಯಮಿತ ಕಾಲದಲ್ಲಿ ಆ ದರ್ಶನ ನೆರವೇರುವುದು. ಅದರ ಅಂತಿಮ ಪರಿಣಾಮ ಶೀಘ್ರದಲ್ಲಿ ಗೊತ್ತಾಗುವುದು. ತಡವಾದರೂ ಕಾದಿರು; ಮೋಸಮಾಡದು. ಅದು ಖಂಡಿತವಾಗಿ ಕೈಗೂಡುವುದು; ತಾಮಸವಾಗದು. 4ನೋಡು, ನೇರಮನಸ್ಕನಲ್ಲದವನು, ಉಬ್ಬಿಹೋಗಿರುವ ಆ ದುರ್ಜನನು ಉಳಿಯನು; ದೇವರೊಂದಿಗೆ ಸತ್ಸಂಬಂಧ ಹೊಂದಿರುವ ಸಜ್ಜನನು ವಿಶ್ವಾಸದಿಂದಲೇ ಬಾಳುವನು.

## ದುರುಳರ ದುರಂತ

5 ಐಶ್ವರ್ಯ ಮೋಸಕರ, ಮದವೇರಿದವನು ಮತ್ತನಾದವನಂತೆ ಅಸ್ಥಿರ. ಅವನ ಅತಿಯಾಸೆ ಪಾತಾಳದಷ್ಟು ವಿಶಾಲ. ಮೃತ್ಯುವಿನಂತೆ ಅವನಿಗೆ ತೃಪ್ತಿಯೇ ಇಲ್ಲ. ಸಕಲ ಜನಾಂಗಗಳನ್ನು ಬಲೆಯೊಳಗೆ ಎಳೆದುಕೊಳ್ಳುತ್ತಾನೆ. ಸಮಸ್ತ ಜನಾಂಗಗಳನ್ನು ರಾಶಿಮಾಡಿಕೊಳ್ಳುತ್ತಾನೆ. 6ಆದರೆ ಹೀಗೆ ಅವನಿಂದ

ಆಕರ್ಷಿತರಾದವರೆಲ್ಲ ಅವನ ಸಮಾಚಾರವೆತ್ತಿ ಗೇಲಿಯ ಲಾವಣಿ ಕಟ್ಟುವರು. “ತನ್ನದಲ್ಲದನ್ನು ಹೆಚ್ಚು ಹೆಚ್ಚಾಗಿ ತುಂಬಿಸಿಕೊಂಡವನಿಗೆ ಧಿಕ್ಕಾರ! ಬಡ್ಡಿಗಾಗಿ ಅಡವಿಟ್ಟ ವಸ್ತುಗಳನ್ನು ರಾಶಿಮಾಡಿಕೊಂಡವನಿಗೆ ಧಿಕ್ಕಾರ! ಎಷ್ಟು ಕಾಲ ಹೀಗೆ ಮಾಡಿಯಾನು?”

7 ನಿನ್ನ ಸಾಲಗಾರರೇ ತಟ್ಟನೆ ನಿನಗೆದುರಾಗಿ ನಿಲ್ಲುವರು; ಬಾಕಿದಾರರೇ ಎಚ್ಚೆತ್ತು ನಿನಗೆ ಬೆದರಿಕೆ ಹಾಕುವರು. ಕೊಳ್ಳೆಹೊಡೆದು ನಿನ್ನನ್ನು ಲೂಟಿಮಾಡುವರು.
8ನೀನು ಅನೇಕ ಜನಾಂಗಗಳನ್ನು ಕೊಳ್ಳೆಹೊಡೆದಿರುವೆ. ಜನರ ರಕ್ತವನ್ನು ಸುರಿಸಿರುವೆ. ನಾಡುಗಳನ್ನೂ ನಗರಗಳನ್ನೂ ಅವುಗಳ ನಿವಾಸಿಗಳನ್ನೂ ಹಿಂಸಿಸಿರುವೆ. ಈ ಕಾರಣ, ಜನಾಂಗಗಳಲ್ಲಿ ಅಳಿದುಳಿದವರೆಲ್ಲರು ನಿನ್ನನ್ನು ಕೊಳ್ಳೆಹೊಡೆಯುವರು.

9 ಕೇಡಿನಿಂದ ತಪ್ಪಿಸಿಕೊಳ್ಳುವ ಸಲುವಾಗಿ ನಿನ್ನ ನಿವಾಸವನ್ನು ಎತ್ತರವಾಗಿ ಕಟ್ಟಿಕೊಂಡೆ, ನಿನ್ನ ಕುಟುಂಬಕ್ಕಾಗಿ ಇತರರ ಆಸ್ತಿಯನ್ನು ಅನ್ಯಾಯವಾಗಿ ದೋಚಿಕೊಂಡೆ, ನಿನಗೆ ಧಿಕ್ಕಾರ!
10ನಿನ್ನ ಯೋಜನೆಗಳಿಂದ ನಿನ್ನ ಮನೆತನಕ್ಕೆ ಅಪಕೀರ್ತಿ ತಂದುಕೊಂಡಿರುವೆ. ಹಲವಾರು ನಾಡುಗಳನ್ನು ನಿರ್ಮೂಲ ಮಾಡಿ ನಿನ್ನ ವಂಶಕ್ಕೆ ವಿನಾಶವನ್ನು ಬರಮಾಡಿಕೊಂಡಿರುವೆ.
11ಗೋಡೆಯಲ್ಲಿ ಇರುವ ಕಲ್ಲುಗಳೇ ನಿನಗೆ ವಿರುದ್ಧವಾಗಿ ಕೂಗುವುವು. ಚಾವಣಿಯ ತೊಲೆಗಳು ಸಹ ಅದಕ್ಕೆ ಮಾರ್ದನಿ ಕೂಡಿಸುವುವು.

12 ನರಹತ್ಯೆಯಿಂದ ನಗರಗಳನ್ನು ನಿರ್ಮಿಸುವವನಿಗೆ ಧಿಕ್ಕಾರ! ಅನ್ಯಾಯವಾದ ಅಸ್ತಿಭಾರದ ಮೇಲೆ ಊರನ್ನು ಕಟ್ಟುವವನಿಗೆ ಧಿಕ್ಕಾರ!
13ಜನರು ದುಡಿದದ್ದು ಬೆಂಕಿಗೆ ತುತ್ತಾಗುವುದು. ಜನಾಂಗಗಳು ಪಟ್ಟ ಪರಿಶ್ರಮ ವ್ಯರ್ಥವಾಗುವುದು. ಇದೆಲ್ಲ ಸೇನಾಧೀಶ್ವರ ಸರ್ವೇಶ್ವರನ ಚಿತ್ತವಷ್ಟೆ.
14ಸಮುದ್ರವು ನೀರಿನಿಂದ ತುಂಬಿ ಇರುವಂತೆ ಜಗವು ಸರ್ವೇಶ್ವರಸ್ವಾಮಿಯ ಮಹಿಮೆಯ ಜ್ಞಾನದಿಂದ ತುಂಬಿರುವುದು.

15 ನಿನ್ನ ರೋಷವನ್ನು ಮಧುಪಾನಕ್ಕೆ ಬೆರಸಿ, ಅವರ ಬೆತ್ತಲೆತನವನ್ನು ನೋಡಬೇಕೆಂದಿರುವ ನಿನಗೆ ಧಿಕ್ಕಾರ!
16ನೀನು ಸನ್ಮಾನದಿಂದಲ್ಲ, ಅವಮಾನದಿಂದ ತುಂಬಿರುವೆ; ನೀನೂ ಕುಡಿ; ಕುಡಿದು ನಗ್ನನಾಗು. ಸರ್ವೇಶ್ವರ ಸ್ವಾಮಿಯ ಬಲಗೈಯಲ್ಲಿರುವ ಕೋಪದ ಕೊಡ ನಿನ್ನ ಪಾಲಿಗೂ ಬರುವುದು. ಅವಮಾನವೇ ನಿನ್ನ ಸನ್ಮಾನವನ್ನು ಆವರಿಸಿಬಿಡುವುದು.
17ನೀನು ಜನರ ರಕ್ತವನ್ನು ಸುರಿಸಿರುವೆ. ನಾಡುಗಳನ್ನೂ ನಗರಗಳನ್ನೂ ಅವುಗಳ ನಿವಾಸಿಗಳನ್ನೂ ಹಿಂಸಿಸಿರುವೆ. ಲೆಬನೋನ್ ಅರಣ್ಯವನ್ನು ಕಡಿದುಹಾಕಿರುವೆ. ಈಗ ನಿನ್ನನ್ನೇ ಕಡಿದು ಹಾಕಲಾಗುವುದು. ಅದರ ಪ್ರಾಣಿಪಕ್ಷಿಗಳನ್ನು ನಾಶಮಾಡಿರುವೆ. ಈಗ ಅವು ನಿನಗೆ ಭಯಾನಕವಾಗಿರುವುವು.

18 ಕೆತ್ತನೆಯ ವಿಗ್ರಹದಿಂದ ಪ್ರಯೋಜನ ಏನು? ಅದು ಕೇವಲ ಮಾನವನ ಕೃತಿ, ಸುಳ್ಳು ಕಣಿಗಾಗಿ ಇಟ್ಟುಕೊಂಡ ಎರಕದ ಗೊಂಬೆ. ಅದನ್ನು ನಿರ್ಮಿಸಿದಾತನಿಗೆ ಅದು ಯಾವ ಅಭಯವನ್ನು ತಾನೇ ತಂದೀತು? ಅದು ಬಾಯ್ದೆರೆಯಲಾಗದ ಮೂಕ ಬೊಂಬೆಯಷ್ಟೆ.
19ಮರದ ತುಂಡಿಗೆ, ‘ಎಚ್ಚೆತ್ತುಕೊ’; ಜಡಕಲ್ಲಿಗೆ, ‘ಎದ್ದೇಳು’ ಎಂದು ಆಜ್ಞಾಪಿಸುವವನು ನಿಜಕ್ಕೂ ಬುದ್ಧಿಹೀನನು. ಬೊಂಬೆಯು ಬೋಧಿಸಬಲ್ಲದೇ? ಬೆಳ್ಳಿ ಬಂಗಾರವನ್ನು ಅದಕ್ಕೆ ಹೊದಿಸಿರುವುದೇನೋ ನಿಜ. ಆದರೆ ಅದಕ್ಕೆ ಉಸಿರೋ ಇಲ್ಲವೇ ಇಲ್ಲ.

20 ಸರ್ವೇಶ್ವರ ಪ್ರಸನ್ನನಾಗಿಹನು ಪವಿತ್ರಾಲಯದಲ್ಲಿ; ಜಗವೆಲ್ಲ ಮೌನತಾಳಲಿ ಆತನ ಸನ್ನಿಧಿಯಲ್ಲಿ.

### ಪ್ರವಾದಿ ಹಬಕ್ಕೂಕನ ಪ್ರಾರ್ಥನೆ

**3** ಸರ್ವೇಶ್ವರಾ, ಕೇಳಿರುವೆ ನಿನ್ನ ಕೀರ್ತಿಯನು ಬೆರಗಾದೆ ಕೇಳಿ ನಿನ್ನ ಮಹತ್ಕಾರ್ಯವನು.

2 ಮರಳಿ ಮಾಡು ನಮ್ಮೀ ಕಾಲದಲ್ಲಿ ಅವುಗಳನು
ಪ್ರಚುರಪಡಿಸು ಪ್ರಸ್ತುತಕಾಲದಲಿ ಅವುಗಳನು.
ರೋಷಗೊಂಡರೂ ಮರೆಯದಿರು
ಕರುಣೆಯನು.

3 ಬರುತಿಹನು ದೇವನು ಎದೋಮಿನಿಂದ
ಆ ಪರಮಪಾವನಸ್ವಾಮಿ ಪಾರಾನ್

ಪರ್ವತದಿಂದ.
ಆವರಿಸುವುದು ಆತನ ಪ್ರಭಾವ
ಆಕಾಶಮಂಡಲವನು
ತುಂಬಿಹುದು ಆತನ ಮಹಿಮೆ
ಭೂಮಂಡಲವನು.
4 ರವಿಯಂತಿದೆ ಆತನ ತೇಜಸ್ಸಿನ ಮೆರೆತ
ಕಿರಣಗಳು ಹೊರಹೊಮ್ಮುತಿವೆ ಆತನ
ಕರಗಳಿಂದ
ಮರೆಯಾಗಿದೆ ಅಲ್ಲೇ ಆತನ ಶಕ್ತಿಸಾಮರ್ಥ್ಯ.
5 ಸಾಗುತಿದೆ ವ್ಯಾಧಿ ಆತನ ಮುಂದೆ
ಬರುತಿದೆ ಮೃತ್ಯು ಆತನ ಹಿಂದೆ.
6 ಕಂಪಿಸುತ್ತದೆ ಭೂಮಿ ಆತ ನಿಂತಾಗ
ಅದರುತ್ತದೆ ಲೋಕ ಆತ ದಿಟ್ಟಿಸಿದಾಗ
ಸೀಳಿಹೋಗುತ್ತವೆ ಪುರಾತನಪರ್ವತಗಳು
ಕುಸಿದುಬೀಳುತ್ತವೆ ಸನಾತನ ಗಿರಿಗಳು
ಅನಾದಿಯಿಂದ ಹಾಗೆಯೆ ಆತನ
ಆಗಮನಗಳು.
7 ಇಗೋ, ತಳಮಳಗೊಂಡಿವೆ ಕೂಷಾನಿನ
ಗುಡಾರಗಳು
ನಡುಗುತ್ತಿವೆ ಮಿದ್ಯಾನ್ ನಾಡಿನ ಡೇರೆಗಳು.
8 ಮೋಡಗಳ ಮೇಲೆ ನೀ ಆಗಮಿಸಿದೆ ಏಕೆ?
ಜಯರಥಗಳಲ್ಲಿ ಅಸೀನನಾಗಿ ಬಂದೆ ಏಕೆ?
ಸರ್ವೇಶ, ನಿನಗೆ ರೌದ್ರವೇ ನದಿಗಳ ಮೇಲೆ?
ಸಿಟ್ಟುಸಿಡುಕವೇ ಹೊಳೆಗಳ ಮೇಲೆ?
ರೋಷಾವೇಷವೇ ಸಮುದ್ರದ ಮೇಲೆ?
9 ತೆಗೆದಿಟ್ಟೆ ಬಿಲ್ಲನು ತೋಳಿನಿಂದ
ಹೊರಡಿಸಿದೆ ಬಾಣಗಳನು ಅದರಿಂದ
ಸೀಳಿರುವೆ ಭೂಮಿಯನು ನದಿಗಳಿಂದ.
10 ನಿನ್ನ ನೋಡಿ ತಳಮಳಗೊಳ್ಳುತ್ತವೆ ಬೆಟ್ಟಗಳು
ಹರಿಯುತ್ತವೆ ಆಗಸದಿಂದ ಪ್ರವಾಹಗಳು
ಕೈಯೆತ್ತಿ ಭೋರ್ಗರೆಯುತ್ತವೆ ಸಾಗರಗಳು.
11 ಹಾರಿ ಓಡುವ ನಿನ್ನ ಬಾಣಗಳ ಬೆಳಕಿಗೆ
ಥಳಥಳಿಸುವ ನಿನ್ನ ಈಟಿಯ ಹೊಳಪಿಗೆ
ಸೂರ್ಯಚಂದ್ರ ಅಡಗುತ್ತವೆ ಗೂಡಿನೊಳಗೆ.
12 ಧರೆಯನು ನೀ ಹಾದುಹೋಗುವೆ ರೌದ್ರದಿಂದ
ರಾಷ್ಟ್ರಗಳನು ತುಳಿದುಹಾಕುವೆ
ರೋಷದಿಂದ.
13 ಹೊರಟಿರುವೆ ನಿನ್ನ ಪ್ರಜೆಗಳ ರಕ್ಷಣೆಗೆ
ನಿನ್ನ ಅಭಿಷಿಕ್ತನ ಜೀವೋದ್ಧಾರಕೆ.
ಬಡಿದುಹಾಕಿರುವೆ ದುರುಳನ ಬುರುಡೆಯನು

ನೆಲಸಮಮಾಡಿರುವೆ ಅವನ ಮನೆಯನು.
14 ದೀನರನು ಗುಟ್ಟಾಗಿ ದಮನಮಾಡಿ
ಹಿಗ್ಗುವವರಂತೆ
ನನ್ನ ಚದರಿಸಲು ಬಂದರು ಅವನ ಭಟರು
ಬಿರುಗಾಳಿಯಂತೆ
ಅವನ ಆಯುಧಗಳಿಂದಲೆ ಅವರ ತಲೆಯನು
ನೀ ಬಡಿದೆ.
15 ಅಶ್ವಗಳನ್ನೇರಿ ನೀ ಸಮುದ್ರವನು ದಾಟಿದೆ
ನೊರೆಗರೆಯುವ ಜಲರಾಶಿಯನು
ಹಾದುಹೋದೆ.
16 ಇದಕೇಳಿ ನಡುನಡುಗಿತು ನನ್ನ ಒಡಲು
ಅದುರಿದವು ಆ ಶಬ್ದಕ್ಕೆ ನನ್ನ ತುಟಿಗಳು
ಕೊಳೆತಂತಾದವು ನನ್ನೆಲುಬುಗಳು
ನಿಂತಲ್ಲೇ ತತ್ತರಿಸಿದವು ನನ್ನ ಕಾಲುಗಳು
ಆಪತ್ತು ಬಂದೊದಗುವುದು
ನಮ್ಮನ್ನು ಆಕ್ರಮಿಸುವವರಿಗೆ
ಕಾದಿರುವೆ ನಾನು ಸಹನಶೀಲನಾಗಿ
ಅಂದಿನವರೆಗೆ.
17 ಅಂಜೂರದ ಮರ ಚಿಗುರದೆಹೋದರೂ
ದ್ರಾಕ್ಷಾಲತೆಗಳಲ್ಲಿ ಹಣ್ಣು ಕಾಣದೆಹೋದರೂ
ಎಣ್ಣೆಮರಗಳ ಉತ್ಪತ್ತಿಯು ಶೂನ್ಯವಾದರೂ
ಹೊಲಗದ್ದೆಗಳು ಆಹಾರ ಕೊಡದೆಹೋದರೂ
ಕುರಿಹಟ್ಟಿಗಳು ಬರಿದಾಗಿಹೋದರೂ
ಕೊಟ್ಟಿಗೆಗಳಲ್ಲಿ ದನಕರುಗಳು ಇಲ್ಲವಾದರೂ,
18 ಸಂತೋಷಿಸುವೆ ನಾನು ಸರ್ವೇಶ್ವರನಲಿ
ಆನಂದಿಸುವೆ ನನ್ನ ಉದ್ಧಾರಕ ದೇವನಲಿ.
19 ಸ್ವಾಮಿ ಸರ್ವೇಶ್ವರ ನೀಡುವನೆನಗೆ ಧೀರತೆ
ಚುರುಕುಗೊಳಿಸುವನಾತ ನನ್ನ ಕಾಲುಗಳನು
ಜಿಂಕೆಯಂತೆ
ಮಾಡುವನು ಬೆಟ್ಟಗುಡ್ಡಗಳಲಿ ನಾನು
ಓಡಾಡುವಂತೆ.